# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸುತ್ತೋಲೆ:2024-25

ದಿನಾಂಕ:31.07.2024

## : ಸುತ್ತೋಲೆ :

ವಿಷಯ : ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಹಾಗೂ ಘಟಕ ಕಾಲೇಜುಗಳಲ್ಲಿ ಆಯೋಜಿಸುವ ಕಾರ್ಯಕ್ರಮಗಳಲ್ಲಿ ಹಾಡುಗಳ ಬಳಕೆ ಕುರಿತು.

* * * * *

ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು ಹಾಗೂ ಘಟಕ ಕಾಲೇಜುಗಳಲ್ಲಿ ಆಯೋಜಿಸುವ ಸಾಂಸ್ಕೃತಿಕ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ವಿವಿಧ ಭಾಷೆಗಳ ಚಲನಚಿತ್ರ ಗೀತೆಗಳನ್ನು ಹಾಕುತ್ತಿರುವುದನ್ನು ಹಾಗೂ ಸದರಿ ಗೀತೆಗಳಿಗೆ ವಿದ್ಯಾರ್ಥಿಗಳು ನೃತ್ಯ ಮಾಡುತ್ತಿರುವುದನ್ನು ಗಮನಿಸಲಾಗಿದೆ.

ಇನ್ನು ಮುಂದೆ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು ಹಾಗೂ ಘಟಕ ಕಾಲೇಜುಗಳಲ್ಲಿ ಆಯೋಜಿಸುವ ಸದರಿ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಅಸಭ್ಯ ಹಾಗೂ ಪ್ರಚೋದನೆಗಳಿಗೆ ಒಳಪಡುವ ಹಾಡುಗಳನ್ನು ಬಳಸದಂತೆ ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ಹಾಗೂ ವಿಶ್ವವಿದ್ಯಾನಿಲಯದ ಘನತೆಗೆ ಧಕ್ಕೆ ಬಾರದಂತಹ ಗೀತೆಗಳನ್ನು ಬಳಸಿಕೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

31/7

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: (ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಸೂಚಿಸಿದೆ)